# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 734

2) ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)

3) ಉತ್ತರಿಸಬೇಕಾದ ದಿನಾಂಕ : 12-03-2025

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮೀನುಗಾರಿಕೆ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಹೊನ್ನಾವರ ತಾಲ್ಲೂಕಿನ ಮಂಕಿ / ಕಾಸರಗೋಡದಲ್ಲಿ ಮೀನುಗಾರಿಕೆ ಸಂಶೋಧನಾ ಕೇಂದ್ರ ಸ್ಥಾಪನೆ, ಭದ್ರಾವತಿಯಲ್ಲಿ ಅತ್ಯಾಧುನಿಕ ಮೀನು ಮಾರುಕಟ್ಟೆ ಸ್ಥಾಪನೆ, ಅಕ್ವಾಪಾರ್ಕ್‌ಗಳ ಸ್ಥಾಪನೆ, ಭಟ್ಕಳ ತಾಲ್ಲೂಕಿನ ಮುರುಡೇಶ್ವರ ದಲ್ಲಿ ಸುಸಜ್ಜಿತ ಮೀನುಗಾರಿಕೆ ಹೊರ ಬಂದರು ನಿರ್ಮಾಣ, ವಿಜಯಪುರದ ಆಲಮಟ್ಟಿಯಲ್ಲಿ ಒಳನಾಡು ಮೀನುಗಾರಿಕೆ ಕೌಶಲಾಭಿವೃದ್ಧಿ ಕೇಂದ್ರವನ್ನು ಯಾವಾಗ ಸ್ಥಾಪನೆ ಮಾಡಲಾಗುವುದು; ಹಿಂದಿನ ಆಯವ್ಯಯದಲ್ಲಿ ಘೋಷಿಸಿದ್ದ ಕಾಮಗಾರಿಗಳನ್ನು ಕೈಗೆತ್ತಿ ಕೊಳ್ಳಲಾಗಿದೆಯೆ; ಇದ್ದಲ್ಲಿ, ಕಾಮಗಾರಿಗಳು ಯಾವ ಹಂತದಲ್ಲಿವೆ; | 2024-25ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾದ ಈ ಕಾಮಗಾರಿಗಳ ಪ್ರಸ್ತುತ ಹಂತದ ಮಾಹಿತಿಯನ್ನು **<u>ಅನುಬಂಧ</u>**ದಲ್ಲಿ ನೀಡಲಾಗಿದೆ. |
| ಆ) | ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಬೇಕಾಗುವ ಅನುದಾನವೆಷ್ಟು ಮತ್ತು ಅನುದಾನವನ್ನು ಮೀಸಲಿಡಲಾಗಿದೆಯೇ; | ಈ ಕಾಮಗಾರಿಗಳ ಯೋಜನಾ ವೆಚ್ಚದ ಮಾಹಿತಿಯನ್ನು **<u>ಅನುಬಂಧ</u>**ದಲ್ಲಿ ನೀಡಲಾಗಿದೆ. ಸದರಿ ಕಾಮಗಾರಿಗಳ ಅನುಷ್ಠಾನದ ಕುರಿತು ವಿವಿಧ ಇಲಾಖೆಗಳೊಂದಿಗೆ ಅಭಿಪ್ರಾಯ / ಸಮಾಲೋಚನೆಗಳ ಹಿನ್ನೆಲೆಯಲ್ಲಿ ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| ಇ) | ಸದರಿ ಕಾಮಗಾರಿಗಳಿಗೆ ಟೆಂಡರ್ ಕರೆಯ ಲಾಗಿದೆಯೇ; ಹಾಗೂ ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ; | |
| ಈ) | ಈ ಕಾಮಗಾರಿಗಳನ್ನು ಯಾವಾಗ ಪೂರ್ಣ ಗೊಳಿಸಿ ಲೋಕಾರ್ಪಣೆ ಮಾಡಲಾಗುವುದು? (ಮಾಹಿತಿ ನೀಡುವುದು) | |

ಸಂಖ್ಯೆ: ಪಸಂಮೀ ಇ-52 ಮೀಇಯೋ 2025

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 734 ಕ್ಕೆ ಅನುಬಂಧ**

| ಕ್ರ. ಸಂ. | ಘೋಷಣೆ/ಯೋಜನೆ/ಕಾಮಗಾರಿ ವಿವರ | ಅಗತ್ಯವಿರುವ ಅನುದಾನ (ರೂ. ಲಕ್ಷಗಳಲ್ಲಿ) | ಪ್ರಸ್ತುತ ಹಂತ |
|---|---|---|---|
| 1 | ಹೊನ್ನಾವರ ತಾಲ್ಲೂಕಿನ ಮಂಕಿ/ಕಾಸರಕೋಡದಲ್ಲಿ ಮೀನುಗಾರಿಕೆ ಸಂಶೋಧನಾ ಕೇಂದ್ರ ಸ್ಥಾಪನೆ | - | ಹೊನ್ನಾವರ ತಾಲ್ಲೂಕಿನ ಮಂಕಿ/ಕಾಸರಕೋಡದಲ್ಲಿ ಜಾಗದ ಲಭ್ಯತೆ ಇಲ್ಲದ ಕಾರಣ ಉತ್ತರಕನ್ನಡ ಜಿಲ್ಲೆಯ ಭಟ್ಕಳದಲ್ಲಿ 9.36 ಎಕರೆ ಜಾಗ ಗುರುತಿಸಿ ಸರ್ವೇ ಕಾರ್ಯ ನಡೆಸಲಾಗಿದ್ದು ಜಾಗವನ್ನು ಮೀನುಗಾರಿಕೆ ಇಲಾಖೆಗೆ ಹಸ್ತಾಂತರ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| 2 | ಭದ್ರಾವತಿಯಲ್ಲಿ ಅತ್ಯಾಧುನಿಕ ಮೀನು ಮಾರುಕಟ್ಟೆ ಸ್ಥಾಪನೆ. | 2700.00 | ಕೇಂದ್ರ ಪುರಸ್ಕೃತ ಪಿಎಂಎಂಎಸ್‌ವೈ ಯೋಜನೆಯಡಿ ಶಿವಮೊಗ್ಗ ಜಿಲ್ಲೆ ಭದ್ರಾವತಿ ತಾಲ್ಲೂಕಿನಲ್ಲಿ ರೂ. 27.00ಕೋಟಿಗಳ ಒಟ್ಟು ಯೋಜನಾ ವೆಚ್ಚದಲ್ಲಿ ಸುಸಜ್ಜಿತ ಮೀನು ಮಾರುಕಟ್ಟೆ ಸ್ಥಾಪನೆ ಮಾಡಲು ವಿಸ್ತೃತವಾದ ಯೋಜನಾ ವರದಿಯನ್ನು ತಯಾರಿಸಿ ಮಾರುಕಟ್ಟೆ ನಕ್ಷೆಯೊಂದಿಗೆ ಕೇಂದ್ರ ಸರ್ಕಾರದ ಅನುಮೋದನೆಗಾಗಿ ಪ್ರಸ್ತಾವನೆಯನ್ನುಸಲ್ಲಿಸಲಾಗಿರುತ್ತದೆ. ಅನುಮೋದನೆ ನಿರೀಕ್ಷಿಸಲಾಗಿದೆ. |
| 3 | ಅಕ್ವಾ ಪಾರ್ಕ್ ಗಳ ಸ್ಥಾಪನೆ | - | ರಾಜ್ಯದ ಆಯವ್ಯಯದಲ್ಲಿ ಅಕ್ವಾ ಪಾರ್ಕ್ ಸ್ಥಾಪನೆ ಮಾಡಲು ಉದ್ದೇಶಿಸಿದೆ. ಕೇಂದ್ರ ಸರ್ಕಾರಕ್ಕೆ ವಿಸ್ತೃತ ಯೋಜನಾ ವರದಿ ತಯಾರಿಸಿ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ. |
| 4 | ಭಟ್ಕಳ ತಾಲ್ಲೂಕಿನ ಮುರುಡೇಶ್ವರದಲ್ಲಿ ಸುಸಜ್ಜಿತ ಮೀನುಗಾರಿಕೆ ಹೊರ ಬಂದರು ನಿರ್ಮಾಣ | 39850.00 | 2024-25 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 58 ರಲ್ಲಿ "ಭಟ್ಕಳ ತಾಲ್ಲೂಕಿನ ಮುರುಡೇಶ್ವರದಲ್ಲಿ ಸುಸಜ್ಜಿತ ಮೀನುಗಾರಿಕೆ ಹೊರ ಬಂದರು ನಿರ್ಮಾಣ ' ಮಾಡಲಾಗುವುದೆಂದು ಎಂದು ಘೋಷಿಸಲಾಗಿದೆ. ಭಟ್ಕಳ ತಾಲ್ಲೂಕಿನ ಮುರುಡೇಶ್ವರದಲ್ಲಿ ಸುಸಜ್ಜಿತ ಮೀನುಗಾರಿಕೆ ಹೊರ ಬಂದರು ನಿರ್ಮಾಣ ಯೋಜನೆಯನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| 5 | ವಿಜಯಪುರದ ಆಲಮಟ್ಟಿಯಲ್ಲಿ ಒಳನಾಡು ಮೀನುಗಾರಿಕೆ ಕೌಶಲ್ಯಾಭಿವೃದ್ಧಿ ಕೇಂದ್ರ ಸ್ಥಾಪನೆ | - | 10 ಎಕರೆ ಜಾಗದ ಅವಶ್ಯಕತೆ ಇದ್ದು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತರವರಿಂದ ಜಾಗ ಹಸ್ತಾಂತರ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದೆ. |

ಮೀನುಗಾರಿಕೆ ನಿರ್ದೇಶಕರು